ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**25.02.2025** **13.10 p.m.**

**<><><><>**

ಮುಖ್ಯಾಂಶಗಳು

- ಭಾರತದ ಉತ್ಪಾದಕರು ಜಾಗತಿಕ ಅಗತ್ಯಗಳನ್ನು ಪೂರೈಸಲು ಸಜ್ಜಾಗಬೇಕು - ಪ್ರಧಾನಿ ನರೇಂದ್ರ ಮೋದಿ
- ಕರ್ನಾಟಕದ ೪೪ ಲಕ್ಷ ಫಲಾನುಭವಿಗಳಿಗೆ ೮೮೭ ಕೋಟಿ ರೂಪಾಯಿ ಪಿಎಂ ಕಿಸಾನ್ ನಿಧಿ ನೆರವು ವರ್ಗಾವಣೆ
- ಕ್ಷಯರೋಗ ನಿರ್ಮೂಲನಾ ಅಭಿಯಾನ; ದೇಶದಲ್ಲಿ ೫ ಲಕ್ಷ ಕ್ಷಯರೋಗಗಳ ಪತ್ತೆ
- ಐಸಿಸಿ ಪುರುಷರ ಚಾಂಪಿಯನ್ಸ್ ಟ್ರೋಫಿ; ಇಂದು ದಕ್ಷಿಣ ಆಫ್ರಿಕಾ-ಆಸ್ಟ್ರೇಲಿಯಾ ಮುಖಾಮುಖಿ

<><><><>

ಅಸ್ಸಾಂನ ಗುವಾಹಟಿಯಲ್ಲಿ ಆರಂಭವಾಗಿರುವ ಅಡ್ವಾಂಟೇಜ್ ಅಸ್ಸಾಂ ೨.೦ ಹೂಡಿಕೆ ಮತ್ತು ಮೂಲಸೌಕರ್ಯ ಸಮಗ್ರ ಶೃಂಗಸಭೆಯನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿದರು. ಬಳಿಕ ಮಾತನಾಡಿದ ಪ್ರಧಾನಿ, ಬರುವ ೨೦೩೦ರ ವೇಳೆಗೆ ಅಸ್ಸಾಂ ಸರ್ವಾಂಗೀಣ ಪ್ರಗತಿ ಸಾಧಿಸಲಿದೆ. ಅಸ್ಸಾಂ ಅಭಿವೃದ್ಧಿಯ ಹೆಬ್ಬಾಗಿಲಾಗಿದ್ದು, ಈಶಾನ್ಯ ರಾಜ್ಯಗಳ ಅಭಿವೃದ್ಧಿಗೆ ವಿಶೇಷ ಒತ್ತು ನೀಡಲಾಗಿದೆ. ಹೂಡಿಕೆಗೆ ಅಸ್ಸಾಂ ಪ್ರಮುಖ ತಾಣವಾಗಿದೆ ಎಂದರು. ಜಾಗತಿಕ ಆರ್ಥಿಕತೆಯಲ್ಲಿ ವ್ಯಾಪಕ ಬದಲಾವಣೆಯಾಗುತ್ತಿದ್ದು, ಇದರಲ್ಲಿ ಭಾರತದ ಪಾತ್ರ ಮಹತ್ವದ್ದಾಗಿದೆ. ಭಾರತದ ಕೈಗಾರಿಕೆಗಳು ದೇಶೀಯ ಅಗತ್ಯಗಳನ್ನು ಪೂರೈಸುತ್ತಿದ್ದು, ಜಗತ್ತಿಗಾಗಿ ಉತ್ಪಾದಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಬೇಕು ಎಂದು ಕರೆ ನೀಡಿದರು. ಅಸ್ಸಾಂ ಉತ್ಪಾದನಾ ಕ್ಷೇತ್ರದಲ್ಲಿ ಮಹತ್ವದ ಸಾಧನೆ ಮಾಡುತ್ತಿದ್ದು, ಪೂರ್ವಾಚಲ ಭಾಗದಲ್ಲಿ ತನ್ನ ಹೆಜ್ಜೆ ಗುರುತುಗಳನ್ನು ಮೂಡಿಸುತ್ತಿದೆ. ಸೆಮಿಕಂಡಕ್ಟರ್ ವಲಯದಲ್ಲಿ ಉತ್ಪಾದನೆಗೆ ವಿಶೇಷ ಗಮನ ಹರಿಸಿದ್ದು, ಭಾರತ ಈ ನಿಟ್ಟಿನಲ್ಲಿ ಪ್ರಮುಖ ತಾಣವಾಗಿ ಹೊರಹೊಮ್ಮುತ್ತಿದೆ. ನವೀಕೃತ ಇಂಧನ ಕ್ಷೇತ್ರದಲ್ಲಿ ಗಮನಾರ್ಹ ಪ್ರಗತಿ ಸಾಧಿಸುತ್ತಿದ್ದು, ೨೦೩೦ರ ವೇಳೆಗೆ ೫೦೦ ಗೀಗಾವ್ಯಾಟ್ ಹಸಿರು ಇಂಧನ ಉತ್ಪಾದನೆ ಗುರಿ ಹೊಂದಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದಿನಿಂದ ಮೂರು ರಾಜ್ಯಗಳಿಗೆ ಐದು ದಿನಗಳ ಪ್ರವಾಸ ಕೈಗೊಳ್ಳಿದ್ದಾರೆ. ಮಾರ್ಚ್ ೧ ರಂದು ಕೊನೆಗೊಳ್ಳುವ ತಮ್ಮ ಭೇಟಿಯ ಸಮಯದಲ್ಲಿ ರಾಷ್ಟ್ರಪತಿಗಳು ಬಿಹಾರ, ಮಧ್ಯಪ್ರದೇಶ ಮತ್ತು ಗುಜರಾತ್‌ನಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಬಿಹಾರದ ಪಾಟ್ನಾ ವೈದ್ಯಕೀಯ ಕಾಲೇಜಿನ ಶತಮಾನೋತ್ಸವ ಸಮಾರಂಭದಲ್ಲಿಂದು ಭಾಗಿಯಾಗಲಿದ್ದಾರೆ. ನಾಳೆ, ರಾಷ್ಟ್ರಪತಿ ಅವರು ಮಧ್ಯಪ್ರದೇಶದ ಛತ್ತರ್‌ಪುರದ ಗಧಾದಲ್ಲಿ ಬಾಗೇಶ್ವರ ಜನ ಸೇವಾ ಸಮಿತಿ ಆಯೋಜಿಸಿರುವ ಸಾಮೂಹಿಕ ವಿವಾಹ ಸಮಾರಂಭದಲ್ಲಿ ಪಾಲ್ಗೊಂಡು, ಏಕತಾ ಪ್ರತಿಮೆಗೆ ಗೌರವ ಸಲ್ಲಿಸಲಿದ್ದಾರೆ ಮತ್ತು ಗುಜರಾತ್‌ನ ಕೆವಾಡಿಯಾದಲ್ಲಿ ನರ್ಮದಾ ಆರತಿಯನ್ನು ವೀಕ್ಷಿಸಲಿದ್ದಾರೆ. ನಾಡಿದ್ದು, ರಾಷ್ಟ್ರಪತಿಗಳು ಕೆವಾಡಿಯಾದಲ್ಲಿರುವ ಏಕತಾ ಕೌಶಲ್ಯ ಅಭಿವೃದ್ಧಿ ಕೇಂದ್ರಕ್ಕೆ ಭೇಟಿ ನೀಡಲಿದ್ದು, ಅಹಮದಾಬಾದ್‌ನಲ್ಲಿರುವ ರಾಷ್ಟ್ರೀಯ ವಿನ್ಯಾಸ ಸಂಸ್ಥೆಯ ೪೪ ನೇ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಶುಕ್ರವಾರ, ಅವರು ಗಾಂಧಿನಗರದಲ್ಲಿರುವ ರಾಷ್ಟ್ರೀಯ ವಿಧಿವಿಜ್ಞಾನ ವಿಶ್ವವಿದ್ಯಾಲಯದ ೨ ನೇ ಘಟಿಕೋತ್ಸವದಲ್ಲಿ ಭಾಗವಹಿಸಲಿದ್ದಾರೆ. ಬಳಿಕ ಭುಜ್‌ನಲ್ಲಿರುವ ಸ್ಮೃತಿವನ್ ಭೂಕಂಪ ಸ್ಮಾರಕಕ್ಕೆ ಭೇಟಿ ನೀಡಲಿದ್ದಾರೆ. ಶನಿವಾರ, ರಾಷ್ಟ್ರಪತಿಗಳು ಯುನೆಸ್ಕೋ ವಿಶ್ವ ಪರಂಪರೆಯ ತಾಣವಾದ ಧೋಲವಿರ ವೀಕ್ಷಿಸಲಿದ್ದಾರೆ.

<><><><>

ಪಿಎಂ ಕಿಸಾನ್ ಸಮ್ಮಾನ್ ಯೋಜನೆಯ ೧೯ನೇ ಕಂತಿನ ನೇರ ನಗದು ವರ್ಗಾವಣೆಯ ಕಾರ್ಯಕ್ರಮದ ನೇರ ಪ್ರಸಾರದ ವ್ಯವಸ್ಥೆಯನ್ನು ತುಮಕೂರಿನಲ್ಲಿ ನಿನ್ನೆ ಆಯೋಜಿಸಲಾಗಿತ್ತು. ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ, ಶಾಸಕರಾದ ಜ್ಯೋತಿ ಗಣೇಶ್, ಸುರೇಶ್ ಗೌಡ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು. ಬಳಿಕ ಸಚಿವ ವಿ. ಸೋಮಣ್ಣ ಮಾತನಾಡಿ, ರಾಜ್ಯದಲ್ಲಿ ಪಿಎಂ ಕಿಸಾನ್ ನಿಧಿ ಯೋಜನೆಯಡಿ ೪೪.೨ ಲಕ್ಷ ಫಲಾನುಭವಿಗಳಿಗೆ ೮೮೪ ಕೋಟಿ ರೂಪಾಯಿಗಳನ್ನು ನೇರ ಖಾತೆಗೆ ಜಮೆ ಮಾಡಲಾಗಿದೆ. ಅದರಲ್ಲಿ ತುಮಕೂರು ಜಿಲ್ಲೆಯಲ್ಲಿ ೨ ಲಕ್ಷ ೪೨ ಸಾವಿರದ ೪೪೨ ಕುಟುಂಬಕ್ಕೆ ೪೫.೪೯ ಕೋಟಿ ರೂಪಾಯಿ ವರ್ಗಾವಣೆ ಮಾಡಲಾಗಿದೆ ಎಂದರು. ಕೇಂದ್ರ ಸರ್ಕಾರ ಕೃಷಿ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಿದೆ. ಫಸಲ್ ಬೀಮಾ ಯೋಜನೆ ಸೇರಿದಂತೆ ಹಲವು ಯೋಜನೆಗಳನ್ನು ಜಾರಿಗೊಳಿಸಿದೆ. ಹವಾಮಾನ

ಆಧಾರಿತ ಬೆಳೆಗಳಿಗೆ ಉತ್ತೇಜನ ಘೋಷಿಸಲಾಗಿದೆ. ಜೊತೆಗೆ ರಸಗೊಬ್ಬರ ಕೈಗೆಟಕುವ ದರದಲ್ಲಿ ದೊರಕುವಂತಾಗಲು ಸಹಾಯಧನ ನೀಡಲಾಗುತ್ತಿದೆ ಎಂದು ತಿಳಿಸಿದರು. ನಂತರ ಸುದ್ದಿಗಾರರೊಂದಿಗೆ ಸಚಿವರು ಮಾತನಾಡಿ, ಮೆಟ್ರೋ ಪ್ರಯಾಣ ದರ ಪರಿಷ್ಕರಣೆ ವಿಷಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಕ್ತ ಕ್ರಮ ಕೈಗೊಳ್ಳಬೇಕು. ಅನಗತ್ಯವಾಗಿ ಕೇಂದ್ರ ಸರ್ಕಾರದ ಮೇಲೆ ಆರೋಪ ಮಾಡುವುದು ಸರಿಯಲ್ಲ ಎಂದರು.

<><><>

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ನಡೆಸಿದ ನೂರು ದಿನಗಳ ಕ್ಷಯರೋಗ ನಿರ್ಮೂಲನಾ ಅಭಿಯಾನದ ಮೂಲಕ ದೇಶಾದ್ಯಂತ ೫ ಲಕ್ಷಕ್ಕೂ ಹೆಚ್ಚು ಕ್ಷಯ ರೋಗಿಗಳನ್ನು ಪತ್ತೆಹಚ್ಚಲಾಗಿದೆ. ಇದುವರೆಗೆ ೧೦ ಕೋಟಿಗೂ ಹೆಚ್ಚು ದುರ್ಬಲ ವ್ಯಕ್ತಿಗಳನ್ನು ಪರೀಕ್ಷೆಗೆ ಒಳಪಡಿಸಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ತಿಳಿಸಿದೆ. ಈ ಅಭಿಯಾನದಡಿ ೧೦ ಲಕ್ಷ ಕ್ಷಯ ರೋಗ ನಿರ್ಮೂಲನಾ ಶಿಬಿರಗಳ ಸ್ಥಾಪನೆ ಮೂಲಕ ಆಧುನಿಕ ಟಿಬಿ ರೋಗ ನಿರ್ಣಯ ಸಾಧನಗಳನ್ನು ಜನರ ಮನೆ ಬಾಗಿಲಿಗೆ ಕೊಂಡೊಯ್ಯಲಾಗಿದೆ.

<><><>

ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯ ಆಯೋಜಿಸಿರುವ ಮುಂಬರುವ ವಿಶ್ವ "ದೃಶ್ಯ, ಶ್ರವಣ ಮತ್ತು ಮನೋರಂಜನೆ ಶೃಂಗಸಭೆ- ವೇವ್ಸ್" ಹಿನ್ನೆಲೆಯಲ್ಲಿ 'ವೇವ್ಸ್ ಪ್ರೋಮೋ ವಿಡಿಯೋ ಚಾಲೆಂಜ್' ಹಮ್ಮಿಕೊಳ್ಳಲಾಗಿದೆ. ಈ ಉಪಕ್ರಮ ಕ್ರಿಯೇಟ್ ಇನ್ ಇಂಡಿಯಾ ಸವಾಲಿನ ಭಾಗವಾಗಿದ್ದು, ಸೃಜನಶೀಲ ನಿರ್ದೇಶಕರು, ಕಥೆಗಾರರು, ರಚನೆಕಾರರಿಗೆ ಅವಕಾಶ ಕಲ್ಪಿಸಲಾಗಿದೆ. ತಾಜಾ ವಿಷಯಗಳ ಕುರಿತು ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ವೇವ್ಸ್ ಪ್ರೋಮೋ ವಿಡಿಯೋ ಚಾಲೆಂಜ್ ಸೂಕ್ತ ವೇದಿಕೆಯಾಗಿದೆ. ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಸಹಯೋಗದೊಂದಿಗೆ ಭಾರತೀಯ ಪ್ರಸಾರ ಮತ್ತು ಡಿಜಿಟಲ್ ಫೌಂಡೇಶನ್ ಈ ಉಪಕ್ರಮವನ್ನು ಆಯೋಜಿಸಿದ್ದು, ಮೇ ತಿಂಗಳ ೧ ರಿಂದ ೪ರ ವರೆಗೆ ಮುಂಬೈನ ಜಿಯೋ ವರ್ಲ್ಡ್ ಕನ್ವೇನ್ಷನ್ ಸೆಂಟರ್‌ನಲ್ಲಿ ಆಯೋಜಿಸಲಾಗಿದೆ. ವೇವ್ಸ್‌ನ ಮೊದಲ ಆವೃತ್ತಿಯಲ್ಲಿ ಮಾಧ್ಯಮ ಮನೋರಂಜನೆ ವಲಯಕ್ಕೆ ಸೀಮಿತವಾಗಿರುವ ಅನನ್ಯ ವೇದಿಕೆಯಾಗಿದೆ. ಜಾಗತಿಕ ಮಾಧ್ಯಮ ಮತ್ತು ಮನೋರಂಜನೆ ಉದ್ಯಮದ ಗಮನವನ್ನು ಭಾರತದತ್ತ ಸೆಳೆಯಲು ಮತ್ತು ಪ್ರತಿಭಾನ್ವಿತರಿಗೆ ಸೂಕ್ತ ವೇದಿಕೆ ಒದಗಿಸುವ ಗುರಿ ಹೊಂದಲಾಗಿದೆ.

<><><>

ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನ ಮಹಾಕುಂಭಮೇಳ ನಾಳೆ ಶಿವರಾತ್ರಿಯ ದಿನದಂದು ಸಂಪನ್ನಗೊಳ್ಳಲಿದೆ. ಈ ಹಿನ್ನೆಲೆಯಲ್ಲಿ ದೇಶ-ವಿದೇಶಗಳಿಂದ ಲಕ್ಷಾಂತರ ಮಂದಿ ಪ್ರಯಾಗ್‌ರಾಜ್‌ಗೆ ಆಗಮಿಸುತ್ತಿದ್ದಾರೆ. ನಿನ್ನೆ ಸಹ ಕೋಟ್ಯಂತರ ಶ್ರದ್ಧಾಳುಗಳು ಪುಣ್ಯಸ್ನಾನದಲ್ಲಿ ಭಾಗಿಯಾದರು. ಈಗಾಗಲೇ ೬೦ ಕೋಟಿಗೂ ಅಧಿಕ ಭಕ್ತರು ತ್ರಿವೇಣಿ ಸಂಗಮದಲ್ಲಿ ಮಿಂದಿದ್ದಾರೆ. ಕುಂಭಮೇಳದಲ್ಲಿ ಭಾಗಿಯಾಗುವ ಭಕ್ತರಿಗೆ ಅಗತ್ಯ ವ್ಯವಸ್ಥೆ ಕಲ್ಪಿಸಲಾಗಿದ್ದು, ಎಲ್ಲೆಡೆ ಬಿಗಿ ಭದ್ರತೆ ಕೈಗೊಳ್ಳಲಾಗಿದೆ. ಸುಮಾರು ೧೫ ಸಾವಿರಕ್ಕೂ ಅಧಿಕ ಕಾರ್ಮಿಕರು ನೈರ್ಮಲ್ಯ ಅಭಿಯಾನದಲ್ಲಿ ಪಾಲ್ಗೊಳ್ಳುವ ಮೂಲಕ ವಿಶ್ವದಾಖಲೆ ಸೃಷ್ಟಿಯಾಗಿದೆ. ಈ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಗಿರುವ ಕುರಿತು ಪುಣ್ಯಸ್ನಾನದಲ್ಲಿ ಭಾಗಿಯಾದ ಯಾತ್ರಾರ್ಥಿಗಳು ಸಂತಸ ವ್ಯಕ್ತಪಡಿಸಿದ್ದಾರೆ.

<><><>

ಬೆಂಗಳೂರು ನಗರದ ನೀರು ನಿರ್ವಹಣೆಗೆ ಕೃತಕ ಬುದ್ಧಿಮತ್ತೆ ತಂತ್ರಜ್ಞಾನವನ್ನು ಸದ್ಬಳಕೆ ಮಾಡಿಕೊಂಡು ಬೇಸಿಗೆಯಲ್ಲಿ ಜಲಕ್ಷಾಮ ತಡೆಗೆ ವ್ಯಾಪಕ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಬೆಂಗಳೂರು ನೀರು ಸರಬರಾಜು ಮತ್ತು ಜಲಮಂಡಳಿ ಅಧ್ಯಕ್ಷ ಡಾ. ವಿ. ರಾಮ್ ಪ್ರಸಾತ್ ಮನೋಹರ್ ಹೇಳಿದ್ದಾರೆ. ಭಾರತೀಯ ವಿಜ್ಞಾನ ಮಂದಿರದಲ್ಲಿ ಇಂಡೋ ಜರ್ಮನ್ ಸೈನ್ಸ್ ಅಂಡ್ ಟೆಕ್ನಾಲಜಿ ಸೆಂಟರ್ ನಿಂದ ಆಯೋಜಿಸಲಾದ "ಸುಸ್ಥಿರ ಆವಾಸ ಸ್ಥಾನ" ಕುರಿತ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಅಂತರ್ಜಲ ಸದ್ಬಳಕೆಗಾಗಿ ಬಿ.ಡಬ್ಲ್ಯು.ಎಸ್.ಎಸ್.ಬಿ ಮತ್ತು ಕೇಂದ್ರ ಅಂತರ್ಜಲ ಪ್ರಾಧಿಕಾರದಿಂದ ಅಂತರ್ಜಲ ಸಂರಕ್ಷಣೆಗಾಗಿ ಕಾರ್ಯಪಡೆ ರಚಿಸಿದ್ದು, ಈ ಮೂಲಕ ಸಾಂಪ್ರಾಯಿಕ ಕೊಳವೆ ಬಾವಿಗಳ ಬಗ್ಗೆ ನಿಗಾ ವಹಿಸಲಾಗಿದೆ.

<><><>

ಮಹಾಶಿವರಾತ್ರಿ ಹಿನ್ನೆಲೆಯಲ್ಲಿ ನಾಳೆ ತಮಿಳುನಾಡಿನ ಕೊಯಮತ್ತೂರಿನಲ್ಲಿ ಸದ್ಗುರು ಜಗ್ಗಿ ವಾಸುದೇವ್ ನೇತೃತ್ವದಲ್ಲಿ ಮಹಾಶಿವರಾತ್ರಿ ಆಯೋಜಿಸಿದ್ದು, ಸದ್ಗುರುಗಳಿಂದ ಮಹಾಮಂತ್ರ ದೀಕ್ಷೆ ಕಾರ್ಯಕ್ರಮ ಆಯೋಜಿಸಲಾಗಿದೆ. ೨೪ ಗಂಟೆಗಳ ಕಾಲ ನಡೆಯುವ ಮಹಾಶಿವರಾತ್ರಿ ಕಾರ್ಯಕ್ರಮದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಪಾಲ್ಗೊಳ್ಳಲಿದ್ದಾರೆ.

<><><>

ಪಾಕಿಸ್ತಾನದ ರಾವಲ್‌ಪಿಂಡಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ಐಸಿಸಿ ಪುರುಷರ ಚಾಂಪಿಯನ್ಸ್ ಟ್ರೋಫಿ ಏಕದಿನ ಕ್ರಿಕೆಟ್ ಸರಣಿಯ ಬಿ ಗುಂಪಿನ ಪಂದ್ಯದಲ್ಲಿ ದಕ್ಷಿಣ ಆಫ್ರಿಕ ತಂಡ ಆಸ್ಟ್ರೇಲಿಯಾ ವಿರುದ್ಧ

ಸೆಣಸಲಿದೆ. ಪಂದ್ಯ ಮಧ್ಯಾಹ್ನ ೨.೩೦ಕ್ಕೆ ಆರಂಭವಾಗಲಿದೆ. ನಿನ್ನೆ ನಡೆದ ಐಸಿಸಿ ಪುರುಷರ ಚಾಂಪಿಯನ್ಸ್ ಟ್ರೋಫಿ ಏಕದಿನ ಕ್ರಿಕೆಟ್ ಸರಣಿಯ 'ಎ' ಗುಂಪಿನ ಪಂದ್ಯದಲ್ಲಿ ಬಾಂಗ್ಲಾದೇಶ ವಿರುದ್ಧ ನ್ಯೂಜಿಲೆಂಡ್ ಐದು ವಿಕೆಟ್‌ಗಳ ಅಂತರದ ಗೆಲುವು ಸಾಧಿಸಿದೆ. ಈ ಮೂಲಕ ಕಿವಿಸ್ ತಂಡ ಸೆಮಿಫೈನಲ್ಸ್‌ಗೆ ಲಗ್ಗೆ ಇಟ್ಟಿದೆ.  ಎ ಗುಂಪಿನಲ್ಲಿ ಭಾರತ ತಂಡ ಸಹ ಸೆಮಿಫೈನಲ್ಸ್ ಪ್ರವೇಶಿಸಿದೆ.

<><><><>

ಸೈಪ್ರಸ್‌ನ ನಿಕೋಸಿಯಾದಲ್ಲಿ ಮೇ ೩ ರಿಂದ ೧೨ ರವರೆಗೆ ನಡೆಯಲಿರುವ ಅಂತರರಾಷ್ಟ್ರೀಯ ಶೂಟಿಂಗ್ ಸ್ಪೋರ್ಟ್ ಫೆಡರೇಶನ್ ವಿಶ್ವಕಪ್ ಶಾಟ್‌ಗನ್‌ಗಾಗಿ ೧೨ ಸದಸ್ಯರ ಪ್ರಬಲ ಭಾರತೀಯ ತಂಡವನ್ನು ಪ್ರಕಟಿಸಲಾಗಿದೆ. ಟೋಕಿಯೊ ಒಲಿಂಪಿಯನ್ ಕೈನಾನ್ ಚೆನೈ ಮತ್ತು ಅನುಭವಿ ಮೈರಾಜ್ ಅಹ್ಮದ್ ಖಾನ್ ಅವರಿಗೆ ತಂಡದಲ್ಲಿ ಅವಕಾಶ ನೀಡಲಾಗಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>